# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.1915/2019

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| **ಹೆಸರು** | : ನಾಗಪ್ಪ | ಚಾಸಾಃ **15** ಪ್ರಾಸಾಃ **11** |
| **ತಂದೆಯ ಹೆಸರು** | : ರಂಗಪ್ಪ | |
| **ವಯಸ್ಸು** | : **65** ವರ್ಷ | |
| **ವೃತ್ತಿ** | : ವ್ಯವಸಾಯ | |
| **ವಾಸಸ್ಥಳ** | : ದೇವನಾಯಕನಹಳ್ಳಿ | |

ದಿನಾಂಕಃ **21-02-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ

ಆರೋಪಿ ಗೊತ್ತಿಲ್ಲ. ಚಾಸಾ-1 ಗೊತ್ತು. ಚಾಸಾ-11 ಗೊತ್ತಿಲ್ಲ. ಚಾಸಾ-1 ರವರು ಹೇಳಿದ ಮೇರೆಗೆ ಪೊಲೀಸರಿಗೆ ದೂರನ್ನು ಬರೆದುಕೊಟ್ಟಿರುತ್ತೇನೆ. ಈ ಬಗ್ಗೆ ಪೊಲೀಸರಿಗೆ ಹೇಳಿಕೆಯನ್ನು ಕೊಟ್ಟಿರುತ್ತೇನೆ.

ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು, ಪೊಲೀಸರಿಗೆ ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ನಿಪಿ-38 ಎಂದು, ಸಾಕ್ಷಿಯ ಸಹಿಯನ್ನು ನಿಪಿ-38(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲು:- ಆರೋಪಿ ಪರ ವಕೀಲರಿಂದಃ-

ಪೊಲೀಸ್ ಠಾಣೆಯಲ್ಲಿ ಚಾಸಾ-1 ರವರು ಹೇಳಿದ ಮೇರೆಗೆ ನಿಪಿ-1 ದೂರಿನಲ್ಲಿ ನಮೂದಾಗಿರುವ ವಿಚಾರಗಳನ್ನು ನಾನು ಬರೆದಿರುತ್ತೇನೆ ಅದನ್ನು ಹೊರತುಪಡಿಸಿ ಈ ಪ್ರಕರಣದ ಬಗ್ಗೆ

ನನಗೆ ಯಾವುದೇ ವಿಚಾರ ಗೊತ್ತಿರುವುದಿಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಚಾಸಾ-1 ರವರು ಹೇಳಿದ ಮೇರೆಗೆ ಸುಳ್ಳು ದೂರನ್ನು ಬರೆದಿದ್ದೇನೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ಸುಳ್ಳು ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.